ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
Brihat Bengaluru Mahanagara Palike

ಮುಖ್ಯ ಅಭಿಯಂತರರು (ದಾಸರಹಳ್ಳಿ) ರವರ ಕಛೇರಿ,
ಪಂ.ಜ.ನೆ ಬಡಾವಣೆ, ಜಾಲಹಳ್ಳಿ, ದಾಸರಹಳ್ಳಿ ವಿಭಾಗ, ಬೆಂಗಳೂರು-560073.

ಸಂಖ್ಯೆ: ಮು.ಅ.(ದಾ)/ಕಾ.ಮಂ/ 23 /2021-22 ದಿನಾಂಕ: 03/04/2021

"ತಾಂತ್ರಿಕ ಮಂಜೂರಾತಿ ಪತ್ರ"

ವಿಷಯ :- Development of park and Construction of Watchman room at bagalagunte 12th cross Nagalakshmi Temple park in dasarahalli Zone ward no 14ರ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ.

ಉಲ್ಲೇಖ :- ಆಡಳಿತಾತ್ಮಕ ಅನುಮೋದನೆ ನಿರೀಕ್ಷಿಸಿ.

ಕಾರ್ಯಪಾಲಕ ಅಭಿಯಂತರರು (ಯೋಜನೆ - ದಾಸರಹಳ್ಳಿ) ವಲಯ ರವರು ಮೇಲ್ಕಂಡ ಕಾಮಗಾರಿಯ ಅಂದಾಜು ಮೊತ್ತವನ್ನು ರೂ.125.64 ಲಕ್ಷಗಳ ಮೊತ್ತಕ್ಕೆ ತಯಾರಿಸಿ, ಆಡಳಿತಾತ್ಮಕ ಅನುಮೋದನೆ ನಿರೀಕ್ಷಿಸಿ, ತಾಂತ್ರಿಕ ಮಂಜೂರಾತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಕಾರ್ಯಪಾಲಕ ಅಭಿಯಂತರರು (ಯೋಜನೆ-ದಾಸರಹಳ್ಳಿ) ರವರ ಪ್ರಸ್ತಾವನೆಯನ್ನು ಪರಿಗಣಿಸಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

Development of park and Construction of Watchman room at bagalagunte 12th cross Nagalakshmi Temple park in dasarahalli Zone ward no 14ರ ಕಾಮಗಾರಿಯ ಅಂದಾಜು ಮೊತ್ತ ರೂ.125.64 ಲಕ್ಷಗಳ ಮೊತ್ತಕ್ಕೆ 2019-20ನೇ ಸಾಲಿನ ಆಯವ್ಯಯ ಪಿ-3588ರ ಅನುದಾನದಡಿಯಲ್ಲಿ ಜಾಬ್ ಸಂಖ್ಯೆ 041-20-ನೇ ಸಾಲಿನಲ್ಲಿ ನೀಡಲಾಗಿರುತ್ತದೆ. ಸದರಿ ಅಂದಾಜು ಪಟ್ಟಿಗೆ ಈ ಕಛೇರಿಯ ತಾಂತ್ರಿಕ ಮಂಜೂರಾತಿ ದಾಖಲಾತಿಯ ವಹಿಯ ಕ್ರಮ ಸಂಖ್ಯೆ 23, ಮತ್ತು ಪುಟ ಸಂಖ್ಯೆ: 27 ರಲ್ಲಿ ನೊಂದಾಯಿಸಿ ರೂ.125.64 ಲಕ್ಷ (ರೂ. ಒಂದು ನೂರ ಇಪ್ಪತ್ತೈದು ಲಕ್ಷದ ಅರವತ್ತಾನ್ಕು ಸಾವಿರದ ಒಂದು ನೂರ ಎರಡು ರೂಪಾಯಿ)ಗಳಿಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ.

ಷರತ್ತುಗಳು :-

1. ಪ್ರಸ್ತಾಪಿತ ಅಂದಾಜು ಪಟ್ಟಿಯಲ್ಲಿ ಅಳವಡಿಸಿಕೊಂಡಿರುವ ವಿಶಿಷ್ಟ ವಿವರಣೆ / ವಿಶಿಷ್ಟತೆ ಸ್ಥಳಕ್ಕೆ ಅನುಗುಣವಾಗಿರುವುದರ ಬಗ್ಗೆ.
2. ಅಂದಾಜು ಪಟ್ಟಿಯಲ್ಲಿ ಪ್ರಸ್ತಾಪಿಸಿರುವ ರಸ್ತೆಗಳನ್ನು ಕಳೆದ ಮೂರು ವರ್ಷಗಳಿಂದ ಯಾವುದೇ ಅನುದಾನದಲ್ಲಿ ಅಭಿವೃದ್ಧಿಗೊಳಿಸದೇ ಇರುವುದರ ಬಗ್ಗೆ.
3. ಪ್ರಸುತ್ತ ಉದ್ದೇಶಿಸಿರುವ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದಕ್ಕೆ ಪೂರಕವಾಗಿ ಈ ಹಿಂದೆ ಅಭಿವೃದ್ಧಿ ಕಾಮಗಾರಿಗಳ ನಿರ್ವಹಣೆ ಅಂಶಗಳ ವಿವರಗಳನ್ನು ರಸ್ತೆ ಇತಿಹಾಸ (Road History) ಪ್ರಸ್ತಕದಲ್ಲಿ ಕಾಮಗಾರಿಯ ವಿವರಗಳನ್ನು ನಮೂದಿಸಿ ನಿರ್ವಹಿಸಿರುವುದರ ಬಗ್ಗೆ.
4. ಪ್ರಸ್ತಾಪಿತ ಕಾಮಗಾರಿಯ ಅಂದಾಜು ಪಟ್ಟಿಯಲ್ಲಿ ಅಳವಡಿಸಿಕೊಂಡಿರುವ ಅನುಪಯುಕ್ತ (Debris) ವಸ್ತುಗಳ ಸಾಗಾಣಿಗೆ ಪೂರಕವಾಗಿ ವಲಯ ವ್ಯಾಪ್ತಿಯ ಅನುಮೋದಿತ (Notified Dumping Yard)ಗೆ ಅನುಗುಣವಾಗಿ ಕಾಮಗಾರಿಯನ್ನು ನಿರ್ವಹಿಸುವ ಸ್ಥಳದಿಂದ Dumping Yardಗೆ ಇರುವ ಅಂತರಕ್ಕೆ ಸಂಬಂಧಿಸಿದಂತೆ Lead Chart ನ್ನು ತಯಾರಿಸಿ ಅನುಮೋದನೆ ಪಡೆದುಕೊಳ್ಳುವ ಬಗ್ಗೆ.
5. Non S.R ದರಗಳಿಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದಿರುವ ಬಗ್ಗೆ.
6. ಪ್ರಸ್ತಾಪಿತ ಕಾಮಗಾರಿಗೆ ಸಂಬಂಧಿಸಿದಂತೆ Defect Liability Period ಮುಗಿದಿರುವ ಬಗ್ಗೆ.
7. ತಳಪಾಯದ ವಿನ್ಯಾಸವನ್ನು ಸಿದ್ದಗೊಳಿಸಿ ಕೆಲಸ ಆರಂಭಿಸುವ ಮುನ್ನ ಈ ಕಛೇರಿಯ ಒಪ್ಪಿಗೆಯನ್ನು ಪಡೆಯತಕ್ಕದ್ದು.
8. ತೆರವುಗೊಳಿಸಿರುವ ಉಪಯುಕ್ತ ಸಾಮಾಗ್ರಿಗಳ ಬಗ್ಗೆ **MAS** ನ ವಹಿಯಲ್ಲಿ ದಾಖಲಿಸುವುದು ಹಾಗೂ ಈ ತರಹದ ಉಪಯುಕ್ತ ಸಾಮಾಗ್ರಿಗಳನ್ನು ಬೇರೆಡೆ ಉಪಯೋಗಿಸಿರುವ (ಮರು ಬಳಿಕೆ ಮಾಡಿರುವ) ಬಗ್ಗೆ ಪ್ರತ್ಯೇಕ ವಹಿಯಲ್ಲಿ ದಾಖಲಿಸಿ ದೃಢೀಕರಿಸಿಕೊಳ್ಳುವುದು.

ಪು.ತಿ.ನೋ

Scanned with CamScanner

9. ಸದರಿ ಕಾಮಗಾರಿಗೆ ನೀಡಲಾದ ವಿವರಗಳ ಬಗ್ಗೆ ಟೆಂಡರ್ ಕರಾರು ಮಾಡಿಕೊಳ್ಳಲಾಗಿದೆ ಎಂಬುದನ್ನು ಧೃಢೀಕರಿಸಿ ಕೊಳ್ಳಬೇಕಾಗಿದೆ.
10. ಪ್ರಸ್ತುತ ಉದ್ದೇಶಿಸಿರುವ ಅಭಿವೃದ್ಧಿ ಕಾಮಗಾರಿಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವುದಕ್ಕೆ ಪೂರಕವಾಗಿ ಈ ಹಿಂದಿನ ಪುಸ್ತಕದಲ್ಲಿ ಕಾಮಗಾರಿಯ ವಿವರಣೆ ಅಂದಾಜಿನ ವಿವರಗಳನ್ನು ಚಸ್ಟ್ ಇತಿಹಾಸ (Road History) ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯಲು ಕ್ರಮ ಕೈಗೊಳ್ಳಲಾಗಿದೆ ಎಂಬುದನ್ನು ಧೃಢೀಕರಿಸಿ ಕೊಳ್ಳಬೇಕಾಗಿದೆ.
11. ನಿಗದಿಯಾದ ವರಿಷ್ಟಾಧಿಕಾರಿಯಿಂದ ಅನುಮೋದನೆಯಾಗಿರುವ ದರಗಳನ್ನು ಉಲ್ಲೇಖಿಸಿ ವಿವರಿಸಿಕೊಳ್ಳುವುದರ ಬಗ್ಗೆ.
12. ಅಂದಾಜು ಪಟ್ಟಿಯಲ್ಲಿ ಅಳವಡಿಸಿರುವ ಇದಗಂಟು ದರಪಟ್ಟಿ (Unit Rate) ಮತ್ತು ದರಗಳ ವಿವರಗಳಿಗೆ (Rate Analysis) ಸಕ್ಷಮ ಪ್ರಾಧಿಕಾರಿಯಿಂದ ಅನುಮೋದನೆ ಪಡೆಯಲು ಕ್ರಮ ಕೈಗೊಳ್ಳಲಾಗಿದೆ ಎಂಬುದನ್ನು ಧೃಢೀಕರಿಸಿ ಕೊಳ್ಳಬೇಕಾಗಿದೆ.
13. ಸದರಿ ಕಾಮಗಾರಿಗೆ ಟೆಂಡರ್ ಆಹ್ವಾನಿಸುವಾಗ Stander Tender Document KW - 1/2/3/4 ಅನ್ವಯ ಮೊತ್ತಗಳಿಗೆ ಉಪಅಂದಾಜನ್ನು ತಯಾರಿಸಿ ಅನುಮೋದನೆ ಪಡೆಯಲು ಕ್ರಮ ಕೈಗೊಳ್ಳಲಾಗಿದೆ ಎಂಬುದನ್ನು ಧೃಢೀಕರಿಸಿ ಕೊಳ್ಳಬೇಕಾಗಿದೆ.
14. ಪ್ರಸ್ತಾಪಿತ ಕಾಮಗಾರಿಗೆ ಸಂಬಂಧಿಸಿದ ಸಕ್ಷಿಯಂತೆ ವಿನ್ಯಾಸಗಳನ್ನು ಪಡೆದು ಕಾಮಗಾರಿಯನ್ನು ನಿರ್ವಹಿಸುವ ಬಗ್ಗೆ.
15. ಕಾಮಗಾರಿಯು ಎಲ್ಲಾ ಹಂತದಲ್ಲಿನ ಕಾಮಗಾರಿಯ ಪೂರ್ವ / ಪ್ರಗತಿ / ಪೂರ್ಣಗೊಂಡ ಛಾಯಾ ಚಿತ್ರವನ್ನು ಲಗತ್ತಿಸುವುದು.
16. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದವರಿಗೆ ಕಾಮಗಾರಿಯ ಟೆಂಡರ್‌ನಲ್ಲಿ ಭಾಗವಹಿಸುವ ಬಗ್ಗೆ ಮಾನ್ಯ ಆಯುಕ್ತರವರ ದಿನಾಂಕ:02/11/2017ರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ:ಆ./ಪಿ.ಆರ್/5054/2017-18 ರಂತೆ ಕ್ರಮವಹಿಸುವುದು.
17. ಸದರಿ ಕಾಮಗಾರಿಯ ಬಿಲ್ ಪಾವತಿಸುವ ಸಂದರ್ಭದಲ್ಲಿ ಮಂಜೂರಾದ ತಾಂತ್ರಿಕ ಮಂಜೂರಾತಿಯ ಮೊತ್ತಕ್ಕೆ ಜಿ.ಎಸ್.ಟಿ / ಇತರೆ ತೆರಿಗೆಗಳನ್ನು ಪಾವತಿಸಿರುವ / ಕಟಾಯಿಸಿಕೊಳ್ಳುವ ಬಗ್ಗೆ ಪರಿಶೀಲಿಸಿ, ಧೃಢೀಕರಿಸಿಕೊಳ್ಳತಕ್ಕದ್ದು.

ಮುಖ್ಯ ಅಭಿಯಂತರರು (ದಾಸರಹಳ್ಳಿ)
ಬೃಹತ್ ಬೆಂಗಳೂರು ಮಹಾನಗರಪಾಲಿಕೆ

ಪ್ರತಿಯನ್ನು:-

1. ಕಾರ್ಯಪಾಲಕ ಅಭಿಯಂತರರು (ಯೋಜನೆ-ದಾಸರಹಳ್ಳಿ) ವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಯವರ ಗಮನಕ್ಕೆ ಕಳುಹಿಸಿದೆ.
3. ಕಛೇರಿ ಕಡತಕ್ಕೆ.

Scanned with CamScanner